**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 3046/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.04**

**ದಿನಾಂಕಃ 19.09.2025** **ಸಿಡಬ್ಲ್ಯೂ.06**

| | |
|---|---|
| ಹೆಸರು | ಸೋಮಲಿಂಗಪ್ಪ |
| ತಂದೆ  ಹೆಸರು | ಮರಿಯಪ್ಪ |
| ವಯಸ್ಸು | 42 ವರ್ಷ |
| ಉದ್ಯೋಗ | ಕೂಲಿ ಕೆಲಸ |
| ವಾಸ ಸ್ಥಳ | ಕಡರನಾಯಕನಹಳ್ಳಿ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ರವರ ಪರಿಚಯವಿಲ್ಲ. ಚಾಸಾ.7 ರವರ ಪರಿಚಯವಿದೆ. ಆರೋಪಿ ಪರಿಚಯವಿದೆ. ಆರೋಪಿ ನಮ್ಮ ಊರಿನವರು. ನನಗೆ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 06.04.2023 ರಂದು ನಾನು ಚಾಸಾ.7 ರವರು ಬೆಳಿಗಿನ ಜಾವ 5.30 ಗಂಟೆಗೆ ಕಡರನಾಯಕನಹಳ್ಳಿಯಿಂದ ಹರಿಹರಕ್ಕೆ ಹೋಗುತ್ತಿರುವಾಗ ಜಮ್ಮುಸಾಬ ರವರ ಜಮೀನಿನ ಬಳಿ ಆರೋಪಿ ತನ್ನ ಟಾಟಾ ಎಸಿ ವಾಹನದಲ್ಲಿ ಹಸುಗಳನ್ನು ಹಾಕುತ್ತಿದ್ದನು ಎಂದರೆ ಸರಿಯಲ್ಲ. ಸದರಿ ಸಂದರ್ಭದಲ್ಲಿ ನಾವು ಆತ ಚಾಸಾ.1 ರವರ ಸಂಬಂದಿಕರೆಂದು ಸುಮ್ಮನಾಗಿದ್ದು ನಂತರದಲ್ಲಿ ಆತ ಹಸುಗಳನ್ನು ಕಳ್ಳತನ ಮಾಡುತ್ತಿದ್ದ ಎಂದು ತಿಳಿದಿರುತ್ತದೆ ಎಂದರೆ ಸರಿಯಲ್ಲ. ಈ ವಿಚಾರವನ್ನು ನಾನು ಚಾಸಾ.1 ರವರಿಗೆ ತಿಳಿಸಿರುತ್ತೇನೆ ಎಂದರೆ ಸರಿಯಲ್ಲ. ಕಳ್ಳತನವಾದ ವಿಚಾರವಾಗಿ ಚಾಸಾ.1 ರವರು ದೂರು ನೀಡಿರುತ್ತಾರೆ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರವಾಗಿ ನಾನು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಗುರುತಿಸಲು ನಿರಾಕರಿಸಿದ ಹೇಳಿಕೆಯನ್ನು ನಿಪಿ.7 ಎಂದು ಗುರುತಿಸಲಾಯಿತು. ಈ ಎಲ್ಲಾ ವಿಚಾರ ತಿಳಿದಿದ್ದರೂ ಸಹ ಆರೋಪಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ